ಇ) ಈ ರೈಲ್ವೆ ಮಾರ್ಗದ ಕಾಮಗಾರಿಯು ಮಂದಗತಿಯಲ್ಲಿ ಸಾಗುತ್ತಿರುವುದರಿಂದ ಈ ಭಾಗದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ರೈಲ್ವೆ ಮಾರ್ಗದ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಉ) ಈ ರೈಲ್ವೆ ಮಾರ್ಗದ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಡಿ.ವಿ. ಸದಾನಂದಗೌಡ

ಅ) ಬಂದಿದೆ.

ಆ) ಈ ಮಾರ್ಗದ ಯೋಜನೆಗೆ 2007–08ನೇ ಸಾಲಿನಲ್ಲಿ ರೈಲ್ವೆ ಮಂಡಳಿಯು ಮಂಜೂರಾತಿಯನ್ನು ನೀಡಿದೆ. ಮಾರ್ಗಕ್ಕೆ ಬೇಕಾದ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ವಿಳಂಬವಾಗಿರುವುದರಿಂದ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿತ್ತು.

ಇ) ಬಂದಿದೆ

ಈ) ಈ ಮಾರ್ಗಕ್ಕೆ ಬೇಕಾದ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಕಾಮಗಾರಿಯು ಪ್ರಗತಿಯಲ್ಲಿದೆ.

ಉ) ಈ ಮಾರ್ಗದ ಕಾಮಗಾರಿಯನ್ನು 2015–16ನೇ ಸಾಲಿನೊಳಗಾಗಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಆಲಮಟ್ಟಿ ಜಲಾಶಯದಿಂದ ಬೆಂಗಳೂರಿಗೆ ಕುಡಿಯುವ ನೀರು

80 : (162)

ಶ್ರೀ ರಾಮಲಿಂಗಾರೆಡ್ಡಿ ವಿಧಾನಸಭಾ ಸದಸ್ಯರು (ಬಿ.ಟಿ.ಎಂ. ಲೇಔಟ್)

ಅ) ಬೆಂಗಳೂರು ನಗರದಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಆಲಮಟ್ಟಿ ಜಲಾಶಯದಿಂದ ನೀರನ್ನು ತರುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ?

ಆ) ಹಾಗಿದ್ದಲ್ಲಿ, ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು?

ಇ) ಈ ಉದ್ದೇಶಿತ ಯೋಜನೆಯಿಂದ ಬೆಂಗಳೂರು ನಗರಕ್ಕೆ ಬರುವ ನೀರಿನ ಪ್ರಮಾಣವೆಷ್ಟು?

ಎಸ್. ಸುರೇಶ್‌ಕುಮಾರ್ ನಗರಾಭಿವೃದ್ಧಿ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ಮತ್ತು ಬೆಂಗಳೂರು ಜಲಮಂಡಳಿ ಸಚಿವರು

ಅ) ಇಲ್ಲ.
ಆ) ಉದ್ಭವಿಸುವುದಿಲ್ಲ.
ಇ) ಉದ್ಭವಿಸುವುದಿಲ್ಲ.
ನಅಇ 95 ಎಂಎನ್‌ಐ 2012

ಕುಡಿಯುವ ನೀರಿನ ಸಮಸ್ಯೆ
75 (150)
ಶ್ರೀ ನೆ.ಲ. ನರೇಂದ್ರಬಾಬು (ಮಹಾಲಕ್ಷ್ಮಿ ಲೇಔಟ್)

ಅ) ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ಬೇಸಿಗೆಯ ಆರಂಭಕ್ಕೆ ಮುನ್ನವೇ ಕುಡಿಯುವ ನೀರಿನ ಸಮಸ್ಯೆ ದಿನೇ ದಿನೇ ಹೆಚ್ಚಾಗುತ್ತಿದ್ದು, ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಆ) ನಂದಿನಿ ಬಡಾವಣೆ ವಾರ್ಡ್ 43 ರಲ್ಲಿ ಕುಡಿಯುವ ನೀರು (ನಂದಿನಿ ಲೇಔಟ್ ಸರ್ವಿಸ್ ಸ್ಟೇಷನ್‌ನಲ್ಲಿ) ಸಂಗ್ರಹಣಾ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಜಲಮಂಡಳಿಯ ಗಮನದಲ್ಲಿದ್ದರೂ ಸಹ ಶೀಘ್ರವಾಗಿ ಕಾಮಗಾರಿಯನ್ನು ಪೂರೈಸಲು ಮಂಡಳಿಗೆ ಇರುವ ತೊಡಕುಗಳೇನು;

ಇ) ತಿಪ್ಪಗೊಂಡನಹಳ್ಳಿ ಜಲಾಶಯಕ್ಕೆ ಕಲುಷಿತ ನೀರು ಬೆರಕೆಯಾಗುತ್ತಿರುವುದು ನಿಜವೇ;

ಈ) ಹಾಗಿದ್ದಲ್ಲಿ, ಇದಕ್ಕೆ ಕಾರಣವೇನು?

ಉ) ಜಲಮಂಡಳಿ ಇದನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮವೇನು;

ಎಸ್. ಸುರೇಶ್‌ಕುಮಾರ್ ನಗರಾಭಿವೃದ್ಧಿ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ಮತ್ತು ಬೆಂಗಳೂರು ಜಲಮಂಡಳಿ ಸಚಿವರು

ಅ) ಮಹಾಲಕ್ಷ್ಮಿ ಲೇಔಟ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್‌ವಾರು, ನೀರಿನ ಸಂಪರ್ಕಗಳು ಹಾಗೂ ಬಳಕೆಯು ಫೆಬ್ರವರಿ 2012 ರಲ್ಲಿ ಈ ಕೆಳಕಂಡಂತಿದೆ: